ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 20-08-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br><br>ಬಸವರಾಜರಾಯರೆಡ್ಡಿ,<br>ಉನ್ನತ ಶಿಕ್ಷಣ ಖಾತೆ ಸಚಿವರು. | 21-08-2016<br>ಭಾನುವಾರ<br>ಮಧ್ಯಾಹ್ನ<br>1-00 ಗಂಟೆಗೆ | ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಅರಮನೆ ರಸ್ತೆ, ಇನ್ಸಿಟ್ಯೂಟ್ ಆಫ್ ಪ್ರಿಂಟಿಂಗ್ ಟೆಕ್ನಾಲಜಿ ಕಟ್ಟಡ, ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ದೇವರಾಜ ಅರಸು ಅವರು ಪರಿವರ್ತನೆಯ ಹರಿಕಾರ– ಮುಖ್ಯಮಂತ್ರಿ

ಬೆಂಗಳೂರು, ಆಗಸ್ಟ್ 20(ಕರ್ನಾಟಕ ವಾರ್ತೆ)

ದಿವಂಗತ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ 101ನೇ ಜನ್ಮ ದಿನಾಚರಣೆಯನ್ನು ಸರ್ಕಾರವು ಅರ್ಥಗರ್ಭಿತವಾಗಿ ಆಚರಿಸುತ್ತದೆ. ಸಮ-ಸಮಾಜದ ನಿರ್ಮಾಣಕ್ಕೆ, ಎಲ್ಲರಿಗೂ ಸಮಾನ ಅಧಿಕಾರ ಮತ್ತು ಸಂಪತ್ತು ಹಂಚಿಕೆಯಾಗಬೇಕು, ಆದರಿಂದ ಯಾರೂ ವಂಚಿತರಾಗಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ವಿಧಾನಸೌಧದ ಪಶ್ಚಿಮ ದ್ವಾರದಲ್ಲಿರುವ ಡಿ. ದೇವರಾಜ ಅರಸು ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಮಾತನಾಡುತ್ತಾ ಅರಸು ಅವರ ಕಾಲ ಪರಿವರ್ತನೆಯ ಪರ್ವ ಮತ್ತು ಸಮಾಜದಲ್ಲಿ ಎಲ್ಲರಿಗೂ ನ್ಯಾಯ ದೊರೆಯಬೇಕು ಎಂದು ನಂಬಿಕೆಯಿಟ್ಟು ಆಡಳಿತ ನಡೆಸಿದ ಮಹಾನ್ ವ್ಯಕ್ತಿಯೆಂದು ಮುಖ್ಯಮಂತ್ರಿ ಅವರು ಬಣ್ಣಿಸಿದರು.

ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧಭಾವವಿಲ್ಲದೆ ಭಾರತದ ಎಲ್ಲಾ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯನಿರ್ವಹಿಸುತ್ತೇನೆಂದು ನಾನು ಈ ಸಂದರ್ಭದಲ್ಲಿ ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲ್ಲಿ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲಾ ಬೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೇ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಪ್ರತಿಜ್ಞೆ ಮಾಡುತ್ತೇನೆ ಎಂದು ಮುಖ್ಯಮಂತ್ರಿಗಳು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನೆರೆದಿದ್ದ ಅಧಿಕಾರಿ, ಸಿಬ್ಬಂದಿ ಹಾಗೂ ಸಾರ್ವಜನಿಕರಿಗೆ ಪ್ರತಿಜ್ಞೆ ಬೋಧಿಸಿದರು.

ಈ ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ, ಉನ್ನತ ಶಿಕ್ಷಣ ಖಾತೆ ಸಚಿವ ಬಸವರಾಜರಾಯರೆಡ್ಡಿ, ಅರಸು ಅವರ ಪುತ್ರಿ ಭಾರತಿ ಅರಸು ಹಾಗೂ ಕುಟುಂಬಸ್ಥರು, ಶಾಸಕ ಹೆಚ್. ಎಂ. ರೇವಣ್ಣ, ದೇವರಾಜ ಅರಸು ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಮಚಂದ್ರಪ್ಪ ಅವರು ಸೇರಿದಂತೆ ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕೆಎನ್‍ವಿ:ಜಿಪಿಆರ್.

## ಅರಸು ಜನ್ಮ ಶತಮಾನೋತ್ಸವ ಸಮಾರೋಪ ಸಮಾರಂಭ

ಬೆಂಗಳೂರು, ಆಗಸ್ಟ್ 20(ಕರ್ನಾಟಕ ವಾರ್ತೆ)

ಸಮಾಜದಲ್ಲಿ ಬದಲಾವಣೆ ತರುವ ಕೆಲಸ ಪ್ರವಾಹದ ವಿರುದ್ಧ ಈಜುವ ರೀತಿಯಂತೆ, ಬದಲಾವಣೆಗೆ ವಿರುದ್ಧವಾಗಿರುವವರು ಶಕ್ತಿಶಾಲಿಗಳು, ಬದಲಾವಣೆ ಬಯಸಿದವರ ವರ್ತಮಾನ ಕ್ರೂರವಾಗಿರುತ್ತದೆ ಮತ್ತು ಭವಿಷ್ಯ ಅವಿಸ್ಮರಣೀಯವಾಗಿರುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ದಿವಂಗತ ದೇವರಾಜ ಅರಸುರವರ 101ನೇ ಜನ್ಮ ದಿನಾಚರಣೆ ಹಾಗೂ ಜನ್ಮ ಶತಮಾನೋತ್ಸವ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ ಅರಸು ಅವರ ಕಾರ್ಯಗಳು ಮತ್ತು ಸಾಧನೆಗಳು ಮುಂದಿನ ಪೀಳಿಗೆಗೆ ಸ್ಫೂರ್ತಿಯಾಗಲು ಹಾಗೂ ದಾಖಲೆಗಳಾಗಿ ಉಳಿಯಲು ಒಂದು ವರ್ಷದ ಅರಸು ಜನ್ಮ ಶತಮಾನೋತ್ಸವ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ಒಂದು ವರ್ಷ ಅವಧಿಗೆ ಹಮ್ಮಿಕೊಳ್ಳಲಾಗಿತ್ತು.

ಅರಸು ಅವರು ಇದೀಗ ನಮ್ಮ ನಡುವೆ ಅಮರರಾಗಿದ್ದಾರೆ ಹಿಂದುಳಿದವರನ್ನು ವಿಧಾನಸಭೆಗೆ ಕರೆತಂದ ಕೀರ್ತಿ ಅವರಿಗೆ ಸಲ್ಲುತ್ತದೆ. ಸತ್ತ ಮೇಲೆ ಸ್ಮರಣೆ ಅಪರೂಪ ಆದರೆ

ಅರಸು ಅವರು ದಿವಂಗತರಾದ ನಂತರವು ಅವರ ಪ್ರಮುಖವಾದ  ಕಾರ್ಯಗಳಿಂದ ಇನ್ನು ಅವರು ಪ್ರಚಲಿತರಾಗಿದ್ದಾರೆ.

70 ರ ದಶಕ ಸುವರ್ಣ ಯುಗವಾಗಿದ್ದು, ಸರ್ವರ ನ್ಯಾಯ, ಅಭಿವೃದ್ಧಿ ಮತ್ತು ಸಮಾನತೆ ಬಯಸುವ ವ್ಯಕ್ತಿಗಳು ಇಂದಿನ ಕಾಲದಲ್ಲಿ ಬೇಕಾಗಿದ್ದಾರೆ.  ಅರಸು ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ನನ್ನ ರಾಜಕೀಯ ಜೀವನವನ್ನು ಕಳೆದಿದ್ದೇನೆ ಮತ್ತು ಮುಂದಿನ ದಿನದಲ್ಲೂ ಅದನ್ನೆ ಪಾಲಿಸುತ್ತೇನೆ ಎಂದು ಹೇಳಿದರು.

ಅರಸು ಜಾತಿ ಆಧಾರದ ಮೇಲೆ ರಾಜಕೀಯದಲ್ಲಿ ಬೆಳೆದವರಲ್ಲ, ಅರಸು ಜಾತಿ ರಾಜದಲ್ಲಿ ಅತಿ ಕಡಿಮೆ ಜನಸಂಖ್ಯೆ ಇರುವ ವರ್ಗವಾಗಿದೆ.  ಮೈಸೂರು ಜಿಲ್ಲೆಯಿಂದ ನಾಲ್ವಡಿ ಕೃಷ್ಣರಾಜ ಒಡೆಯರು ಸೇರಿದಂತೆ ಅರಸು ಅವರು ಸಹ ನಮ್ಮ ಜಿಲ್ಲೆಯವರೇ ಎಂದು ಹೇಳಿಕೊಳ್ಳಲು ಹೆಮ್ಮೆಯಾಗುತ್ತಿದೆ ಎಂದರು.

ಈ ಸಮಾರಂಭದ ಅಧ್ಯಕ್ಷತೆಯನ್ನು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ಮಾತನಾಡಿ, ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಅರಸು ಭವನ ನಿರ್ಮಿಸಲು ಸರ್ಕಾರವು ಉದ್ದೇಶಿಸಿದೆ.  ಸಿದ್ದರಾಮಯ್ಯನವರು ಕರ್ನಾಟಕದ ಎರಡನೇ ದೇವರಾಜ ಅರಸು ಎಂದು ಬಣ್ಣಿಸಿದರು.

ಅರಸು ಅವರ ಜನ್ಮ ಶತಮಾನೋತ್ಸವ ನನ್ನ ಅಧಿಕಾರ ಅವಧಿಯಲ್ಲಿ ಬಂದಿರುವುದು ನನ್ನ ಸೌಭಾಗ್ಯ, ವಿವಿಧ ಸಮಿತಿಗಳ ಮೂಲಕ ವರ್ಷ ಪೂರ್ತಿ ಹಮ್ಮಿಕೊಂಡಿದ್ದ ಕಾರ್ಯಕ್ರಮಗಳಲ್ಲಿ ದುಡಿದ ಎಲ್ಲಾ ಸದಸ್ಯರುಗಳಿಗೂ ಹಾಗೂ ಅಧ್ಯಕ್ಷರುಗಳಿಗೂ ಕೃತಜ್ಞತೆ ಸಲ್ಲಿಸಿದರು.

## 2016 ನೇ ಸಾಲಿನ ಅರಸು ಪ್ರಶಸ್ತಿ:

ಮಾಜಿ ಸಚಿವ ಹಾಗೂ 2016 ನೇ ಸಾಲಿನ ಅರಸು ಪ್ರಶಸ್ತಿ ಪುರಸ್ಕೃತ ಬಿ.ಎ. ಮೊಹಿದ್ದೀನ್ ಅವರು ಮಾತನಾಡಿ ಅರಸು ಒಬ್ಬ ಸ್ನೇಹಮಹಿ ರಾಜಕಾರಣಿಯಾಗಿದ್ದರು. ಅವರಿಗೆ ಯಾರ ಬಗ್ಗೆಯೂ ದ್ವೇಷವಿರಲಿಲ್ಲ.  ಧ್ವನಿಯಿಲ್ಲದವರ ಧ್ವನಿಯಾಗಿದ್ದರು.  ಅರಸು ಹೆಸರು ಅಳಿಸಿಹೋಗುವ ಸಮಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೊಸ ಯೋಜನೆಗಳನ್ನು ಆರಂಭಿಸುವುದರ ಮೂಲಕ ಅವರ ಹೆಜ್ಜೆಯಲ್ಲೇ ನಡೆಯುತ್ತಿದ್ದಾರೆ ಎಂದು ಹೇಳುವ ಮೂಲಕ ಗದ್ಗದಿತರಾದರು.

ಸಮಾರಂಭದ ಕೊನೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಲ್ಲಿ ಓದಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಗಳಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನದ ಚೆಕ್ ಹಾಗೂ ನೆನಪಿನ ಕಾಣಿಕೆಯನ್ನು ನೀಡಿ, ಗೌರವಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ಹಂಸಲೇಖ ದೇಶೀ ಕಾಲೇಜಿನ ವಿದ್ಯಾರ್ಥಿಗಳು ಸಾದರಪಡಿಸಿದ  ಹಂಸಲೇಖ ರಚಿತ ಮತ್ತು ನಿರ್ದೇಶನದ ಅರಸು ಜೀವನ ಕುರಿತು ಕಥಾರೂಪಕ ನೆರದಿದ್ದ ಪ್ರೇಕ್ಷಕರ ಮನ ಸೆಳೆಯಿತು.

ಸಮಾರೋಪ ಸಮಾರಂಭದ ಪ್ರಾರಂಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೊಹ್ಸಿನ್ ಸ್ವಾಗತಿಸಿದರು. ಡಿ. ದೇವರಾಜ್ ಅರಸು ಜನ್ಮ ಶತಮಾನೋತ್ಸವ ಕಾರ್ಯಕಾರಿ ಸಮಿತಿಯ ಉಪಾಧ್ಯಕ್ಷ ಕೆ.ಎಂ. ನಾಗರಾಜ್ ಅವರು ಪ್ರಾಸ್ತಾವಿಕ ನುಡಿಯಲ್ಲಿ ಸರ್ಕಾರ ಕಳೆದ ವರ್ಷಪೂರ್ತಿ ಹಮ್ಮಿಕೊಂಡಿದ್ದ ಕಾರ್ಯಕ್ರಮಗಳ ವಿವರ ನೀಡಿದರು.

ಸಮಾರಂಭದಲ್ಲಿ ರಾಜ್ಯ ಸಚಿವರು, ವಿಧಾನಸಭೆ ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ ಸಭಾಪತಿಯವರು ಸೇರಿದಂತೆ ವಿಧಾನಸಭೆ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಲೋಕಸಭೆ ಹಾಗೂ ರಾಜಸಭಾ ಸದಸ್ಯರು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಜಡಿಯಪ್ಪ:ಪಿಆರ್

# ಕ್ಷೇಮಪಾಲಕರ ನೇಮಕಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 20 (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧೀನದಲ್ಲಿ ಬರುವ 32 ಕ್ರೀಡಾ ಶಾಲೆ, ಕ್ರೀಡಾ ನಿಲಯಗಳಿಗೆ ಗೌರವಧನದ ಆಧಾರದ ಮೇಲೆ ತಾತ್ಕಾಲಿಕವಾಗಿ ಪುರುಷ ಮತ್ತು ಮಹಿಳಾ ಕ್ಷೇಮಪಾಲಕರನ್ನು ನೇಮಿಸಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ ಹಾಗೂ ಸಂದರ್ಶನ ಏರ್ಪಡಿಸಿದೆ.

ಅರ್ಜಿ ಸಲ್ಲಿಸಲು ಮತ್ತು ಸಂದರ್ಶನಕ್ಕೆ ಹಾಜರಾಗಲು ಸೆಪ್ಟೆಂಬರ್ 2 ದಿನಾಂಕ ನಿಗದಿಪಡಿಸಿದೆ. ಹೆಚ್ಚಿನ ವಿವರ ಪಡೆಯಲು ಸಂಪರ್ಕಿಸಬೇಕಾದ ಹಾಗೂ ಅರ್ಜಿ ಸಲ್ಲಿಸಬೇಕಾದ ವಿಳಾಸ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು–560 001.

ಬಾಬು:ಜಿಪಿಆರ್

# ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 20(ಕರ್ನಾಟಕ ವಾರ್ತೆ)

ಕೇಂದ್ರ ಅಥವಾ ರಾಜ್ಯ ಸರ್ಕಾರಗಳಿಂದ ಅಂಗೀಕೃತವಾದ ವಿದ್ಯಾಸಂಸ್ಥೆಗಳಲ್ಲಿ, ಶಿಲ್ಪಕಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2015–16 ನೇಸಾಲಿಗೆ ಮೇಜರ್

ಚಪ್ಪುದಿರ ಪೊನ್ನಪ್ಪ ರಾಜಾರಾಂ ಸ್ಮಾರಕ ಧರ್ಮದತ್ತಿ ನಿಧಿಯಿಂದ ವಿದ್ಯಾರ್ಥಿ ವೇತನ ಪಡೆದುಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಮಾಸಿಕ 250/– ರೂ. ಗಳ ವಿದ್ಯಾರ್ಥಿ ವೇತನವನ್ನು ಜುಲೈ 2016 ರಿಂದ ಏಪ್ರಿಲ್ 2017 ರವರೆಗೆ ನೀಡಲಾಗುವುದು. ವಿದ್ಯಾರ್ಥಿಗಳು ಅರ್ಜಿಗಳನ್ನು ಹಾಗೂ ಕಲಾಕೃತಿಗಳ ಛಾಯಾಚಿತ್ರಗಳನ್ನು ಆಯಾಯ ವಿದ್ಯಾಸಂಸ್ಥೆಯ ಮುಖ್ಯಸ್ಥರಿಂದ ದೃಢೀಕರಿಸಿ ವಿದ್ಯಾಸಂಸ್ಥೆಯ ಮುಖ್ಯಾಧಿಕಾರಿಗಳ ಮುಖಾಂತರ ಸಹಾಯಕ ನಿರ್ದೇಶಕರು, ಕರ್ನಾಟಕ ಸರ್ಕಾರದ ವಸ್ತು ಸಂಗ್ರಹಾಲಯ ಮತ್ತು ವೆಂಕಟಪ್ಪ ಚಿತ್ರಶಾಲೆ, ಬೆಂಗಳೂರು – 560 001, ಇವರಿಗೆ ಸೆಪ್ಟೆಂಬರ್ 5 ರೊಳಗೆ ಕಳುಹಿಸುವಂತೆ ಕೋರಿದೆ. ಅರ್ಜಿಯನ್ನು ಸಂಬಂಧಪಟ್ಟ ವಿದ್ಯಾಸಂಸ್ಥೆಯಿಂದ ಪಡೆಯಬಹುದಾಗಿದೆ.

ಬಾಬು:ಜಿಪಿಆರ್.

# AWARD SCHOLARSHIP

**Bengaluru, Aug 20 (Karnataka Information)**

**It is proposed to award scholarship out of Major Cheppudira Ponnappa Rajaram Endowment Fund at the rate of Rs 250/- per month for a periodof 10 months from July 2016 to April 2017 to the best sculptors, who are studying sculptural art at the Fine Arts College/Institution recognized by Central/State Government during the year 2015-16. Intending candidates may apply through the Head of their Institution in which they are studying. The application forms along with photographs of their works duly attested by the head of the institution should be sent to the undersigned through head of the institution onor before 5-9-2016.**

**Applicationforms can be obtained either from their Institution orfromthe Assistant Director, Karnataka Government Museum and Venkatappa Art Gallery, Kasturba Road, Bengaluru-560 001.**

**babu:gpr.**

# ಉದ್ಯೋಗ ಮೇಳ

ಬೆಂಗಳೂರು, ಆಗಸ್ಟ್ 20(ಕರ್ನಾಟಕ ವಾರ್ತೆ)

ಉದ್ಯೋಗ ಮತ್ತು ತರಬೇತಿ ಇಲಾಖೆಯ ಆಶ್ರಯದಲ್ಲಿ ಆಗಸ್ಟ್ 27 ರ ಶನಿವಾರದಂದು ಬೆಳಿಗ್ಗೆ 10.00 ಗಂಟೆಯಿಂದ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದಲ್ಲಿ "ಉದ್ಯೋಗ ಮೇಳ" ವನ್ನು ಹಮ್ಮಿಕೊಳ್ಳಲಾಗಿದೆ. ಉದ್ಯೋಗ ಮೇಳವು ಬೆಂಗಳೂರಿನ

ಯಲಹಂಕದ ಥಣಿಸಂದ್ರ ರಸ್ತೆಯ ಬಾಗಲೂರು ಮುಖ್ಯರಸ್ತೆಯ ಹತ್ತಿರವಿರುವ ರೇವ ಯೂನಿವರ್ಸಿಟಿಯಲ್ಲಿ ನಡೆಯಲಿದೆ.

ಈ ಉದ್ಯೋಗ ಮೇಳದಲ್ಲಿ ಖಾಸಗಿ ವಲಯದ ಐ.ಟಿ.ಸಿ, ಹೆಚ್‌ಡಿಎಫ್.ಸಿ, ಕೋಟಕ್ ಮಹೇಂದ್ರ, ಟಾಟಾ ಮೋಟರ್ಸ್, ಹೆಚ್‌ಪಿ–ಎಂಫಾಸಿಸ್, ಟಫೇ, ಏರ್ ಇಂಡಿಯಾಸ್ಯಾಟ್ಸ್, ಡಾಯಿಷ್ ಬ್ಯಾಂಕ್, ಆಕ್ಸಿಸ್ ಬ್ಯಾಂಕ್, ಹಿಂದುಜಾ ಗ್ಲೋಬಲ್ ಸಲ್ಯೂಷನ್ಸ್ ಯು.ಬಿ.ಸಿಟಿ, ಜುಬಿಲಿಯಂಟ್ ಫುಡ್ಸ್, ಸೋಡೆಕ್ಸ್, ಎನ್‌ಟಿಟಿಎಫ್, ಇನ್ನು ಮುಂತಾದ ಹೆಸರಾಂತ 50 ಕ್ಕೂ ಹೆಚ್ಚು ಖಾಸಗಿ ಸಂಸ್ಥೆಗಳೂ ಭಾಗವಹಿಸುತ್ತಿದ್ದು, ವಿವಿಧ ತಾಂತ್ರಿಕ ಹಾಗೂ ತಾಂತ್ರಿಕೇತರ ಹುದ್ದೆಗಳಿಗೆ ಸ್ಥಳದಲ್ಲೇ ನೇರವಾಗಿ ಆಯ್ಕೆ ಮಾಡಲಿದ್ದಾರೆ.

ಅಕ್ಷರಸ್ಥರು, ಎಸ್.ಎಸ್.ಎಲ್.ಸಿ. ಅನುತ್ತೀರ್ಣ/ಉತ್ತೀರ್ಣ, ಪಿ.ಯು.ಸಿ. ಐ.ಟಿ.ಐ. ಮತ್ತು ಡಿಪ್ಲೋಮಾ (ಎಲ್ಲಾ ಟ್ರೇಡ್‌ಗಳು) ಮತ್ತು ಸಿ.ಎನ್.ಸಿ. ಆಪರೇಟರ್ಸ್ , ಎಲ್ಲಾ ಪದವೀಧರರು, ಸ್ನಾತಕೋತ್ತರ ಪದವಿ ಹೊಂದಿದ ಹಾಗೂ ವಿಕಲಚೇತನ ಅಭ್ಯರ್ಥಿಗಳಿಗೆ ಉದ್ಯೋಗ ಅವಕಾಶಗಳು ಲಭ್ಯವಿದೆ. ಉದ್ಯೋಗಾಕಾಂಕ್ಷಿಗಳು ತಮ್ಮ ವೈಯಕ್ತಿಕ (ಬಯೋಡಾಟಾ) ವಿವರಗಳೊಂದಿಗೆ "ಉದ್ಯೋಗ ಮೇಳ" ದಲ್ಲಿ ಭಾಗವಹಿಸಿ ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ಕೋರಿದೆ.

ಹೆಚ್ಚಿನ ಮಾಹಿತಿ ಹಾಗೂ ವಿವರಗಳಿಗಾಗಿ ಬೆಂಗಳೂರಿನ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರಗಳ ದೂರವಾಣಿ ಸಂಖ್ಯೆ 223774582 / 22261184 / 2228668 / 22259351 / 28478423 / 23626678 ಸಂಪರ್ಕಿಸಬಹುದಾಗಿದೆ.

ಬಾಬು:ಜಿಪಿಆರ್

## ರಾಜ್ಯ, ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರಗಳ ರಚನೆ

ಬೆಂಗಳೂರು, ಆಗಸ್ಟ್ 20(ಕರ್ನಾಟಕ ವಾರ್ತೆ)

ಪೊಲೀಸ್ ಅಧಿಕಾರಿಗಳ/ಸಿಬ್ಬಂದಿಗಳ ವಿರುದ್ಧ ದೂರುಗಳ ವಿಚಾರಣೆಗಾಗಿ ರಾಜ್ಯ ಮಟ್ಟದಲ್ಲಿ ಪೊಲೀಸ್ ದೂರು ಪ್ರಾಧಿಕಾರ ಮತ್ತು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರಗಳನ್ನು ರಚಿಸಿ ಸರ್ಕಾರದಿಂದ ಆದೇಶ ಹೊರಡಿಸಲಾಗಿದ್ದು, ರಾಜ್ಯ ಮಟ್ಟ ಹಾಗೂ ಎಲ್ಲಾ ಜಿಲ್ಲೆಗಳಲ್ಲಿ ಪೊಲೀಸ್ ದೂರು ಪ್ರಾಧಿಕಾರ ಕಾರ್ಯಾರಂಭವಾಗಿರುತ್ತದೆ.

ಯಾವುದೇ ಸಾರ್ವಜನಿಕ ಸದಸ್ಯನ ಹಕ್ಕುಗಳ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಪೊಲೀಸ್ ವಶದಲ್ಲಿದ್ದಾಗ ಮರಣ, ಐ.ಪಿ.ಸಿ. ಸೆಕ್ಷನ್ 320 ರಲ್ಲಿ ತಿಳಿಸಲಾದಂತಹ ಗಂಭೀರ

ಗಾಯ, ಮಾನಭಂಗ ಅಥವಾ ಮಾನಭಂಗಕ್ಕೆ ಯತ್ನ ಅಥವಾ ಕಾನೂನು ಪ್ರಕಾರದವಲ್ಲದ ಬಂಧನ ಅಥವಾ ವಶದಲ್ಲಿರಿಸಿಕೊಳ್ಳುವುದನ್ನು ದುರ್ನಡತೆಯ ವ್ಯಾಖ್ಯಾನಕ್ಕೆ ಸೇರಿಸಲಾಗಿದೆ.

ರಾಜ್ಯ ಮಟ್ಟದ ಪ್ರಾಧಿಕಾರವು ರಾಜ್ಯ ಉಚ್ಚನ್ಯಾಯಾಲಯದ ನಿವೃತ್ತ ನ್ಯಾಯಾಧೀಶರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ. ಸರ್ಕಾರದ ಪ್ರಧಾನ ಕಾರ್ಯದರ್ಶಿಗಿಂತ ಕಡಿಮೆಯಿಲ್ಲದ ನಾಗರೀಕ ಸೇವಾ ಅಧಿಕಾರಿ, ನಾಗರೀಕ ಸಮಾಜದಿಂದ ಒಬ್ಬ ಸದಸ್ಯ ಹಾಗೂ ಡಿಐಜಿಪಿ ಹುದ್ದೆಗಿಂತ ಕಡೆಮೆ ಇಲ್ಲದ ಓರ್ವ ಮಹಿಳಾ ಐ.ಪಿ.ಎಸ್. ಅಧಿಕಾರಿ ಇವರುಗಳು ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ. ಈ ರಾಜ್ಯ ಮಟ್ಟದ ಪ್ರಾಧಿಕಾರವು ಹೆಚ್ಚುವರಿ ಪೊಲೀಸ್ ಅಧೀಕ್ಷಕರು ಸೇರಿದಂತೆ, ಪೊಲೀಸ್ ಅಧೀಕ್ಷಕರು ಮತ್ತು ಮೇಲ್ಪಟ್ಟದ ಅಧಿಕಾರಿಗಳ ಮೇಲಿನ ತೀವ್ರ ತರವಾದ ದುರ್ನಡತೆಯ ದೂರುಗಳ ಬಗ್ಗೆ ವಿಚಾರಣೆ ಮಾಡಲಿದೆ.

ಜಿಲ್ಲಾ ಮಟ್ಟದ ಪ್ರಾಧಿಕಾರವು ಜಿಲ್ಲಾಧಿಕಾರಿಯನ್ನು ಅಧ್ಯಕ್ಷರನ್ನಾಗಿ ನೇಮಿಸಿ, ಸಹಾಯಕ ಆಯುಕ್ತರ ಹುದ್ದೆಗಿಂತ ಕಡಿಮೆ ಇಲ್ಲದ ನಿವೃತ್ತ ನಾಗರೀಕ ಸೇವಾಧಿಕಾರಿ, ನಾಗರೀಕ ಸಮಾಜದಿಂದ ಓರ್ವ ವ್ಯಕ್ತಿಯನ್ನು ಸದಸ್ಯರನ್ನಾಗಿ ಹಾಗೂ ಸಂಬಂಧಪಟ್ಟ ಜಿಲ್ಲೆಗಳ ಅಧೀಕ್ಷಕರು /ಕಮೀಷನರೇಟ್‌ಗಳ ಪೊಲೀಸ್ ಆಯುಕ್ತರುಗಳನ್ನು ಸದಸ್ಯ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಲಾಗಿದೆ. ಈ ಪ್ರಾಧಿಕಾರವು ಡಿ.ವೈ.ಎಸ್.ಪಿ. ಮತ್ತು ಕೆಳಹಂತದ ಅಧಿಕಾರಿ/ಸಿಬ್ಬಂದಿಗಳ ತೀವ್ರ ತರವಾದ ದುರ್ನಡತೆಯ ದೂರುಗಳ ಬಗ್ಗೆ ವಿಚಾರಣೆ ಮಾಡಲಿದೆಯೆಂದು ಹಾಗೂ ಅಗತ್ಯವಿದ್ದ ಸಂದರ್ಭಗಳಲ್ಲಿ ಸಾರ್ವಜನಿಕರು ಈ ಪ್ರಾಧಿಕಾರಗಳ ಸಹಕಾರ ಪಡೆದುಕೊಳ್ಳಬೇಕೆಂದು ಒಳಾಡಳಿತ ಇಲಾಖೆಯ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್

## ಸಾಹಸ ಕುರಿತ ತರಬೇತಿ ಕಾರ್ಯಕ್ರಮ

ಬೆಂಗಳೂರು, ಆಗಸ್ಟ್ 20 (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖಾ ವತಿಯಿಂದ 2016-17 ನೇ ಸಾಲಿನ ವಿಶೇಷ ಘಟಕ ಹಾಗೂ ಗಿರಿಜನ ಉಪಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಯುವಜನರಿಗೆ ಜಲ ಮತ್ತು ಭೂ ಸಾಹಸ ಕಾರ್ಯಕ್ರಮಗಳಲ್ಲಿ ಬೇಸಿಕ್, ಅಡ್ವಾನ್ಸ್ ತರಬೇತಿ, ತರಬೇತುದಾರರ ತರಬೇತಿ ಇತ್ಯಾದಿ ಶಿಬಿರಗಳನ್ನು ರಾಜ್ಯಾದ್ಯಂತ ವಿವಿಧ ಸ್ಥಳಗಳಲ್ಲಿ 10 ರಿಂದ 21 ದಿನಗಳವರೆಗೆ ಹಮ್ಮಿಕೊಂಡಿದೆ.

ಆಸಕ್ತರು ನೊಂದಾವಣೆಗಾಗಿ ದೂರವಾಣಿ ಸಂಖ್ಯೆ 080-2221146, 9916862778, 94810820178, 9448038220, 9480383764, 7760365079 ಅನ್ನು ಸಂಪರ್ಕಿಸಬಹುದಾಗಿದೆ.

ಬಾಬು:ಜಿಪಿಆರ್

# ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

**ಬೆಂಗಳೂರು, ಆಗಸ್ಟ್ 20(ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ:21-08-2016ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಶ್ರೀ. ರಾಜಶೇಖರ್ ಮತ್ತು ತಂಡ, ಬೆಂಗಳೂರು ರವರಿಂದ ಜನಪದ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ. ಮಂಜುನಾಥ್ ಮತ್ತು ತಂಡ, ಚಾಮರಾಜನಗರ ರವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

4) ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ (ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

5) ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

6) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಚಿ : ಪ್ರಣವ್ ಸ್ವರೂಪ್ ಇವರಿಂದ ಕರ್ನಾಟಿಕ್ ವಾಯಲಿನ್ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ವಾಣಿ ಸ್ಕೂಲ್ , ಬಸವೇಶ್ವರ ನಗರ ಶಾಲಾ ಮಕ್ಕಳಿಂದ ಯಕ್ಷಗಾನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಸಮೂಹ ನೃತ್ಯ ನಾಟ್ಯನಿನಾದ ಸಂಸ್ಥೆರವರಿಂದ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ**

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- **ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯ ವತಿಯಿಂದ ವಿಕಲಚೇತನ ಉದ್ಯೋಗಸ್ಥ ಮಹಿಳೆಯರು ಸಿದ್ಧಪಡಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

ಬಾಬು:ಜಿಪಿಆರ್.